(29)

R-8634453

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ನಡೆಸುತ್ತಿರುವ ಪ್ರವೇಶ ಪರೀಕ್ಷೆಗಳ ಜವಾಬ್ದಾರಿಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸುವ ಬಗ್ಗೆ.

R.G.U.H.S. INWARD / DISPATCH Signature......

---***---

ಓದಲಾಗಿದೆ:

ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರ ದಿ: 07-12-2017 & 01-02-2018 ರ ಪತ್ರ ಸಂಖ್ಯೆ: ಆರ್‌ಜಿಯುಹೆಚ್‌ಎಸ್/ಪಿಜಿಇಟಿ/ಯುಜಿ/05/2017-18.

PGET

ಪ್ರಸ್ತಾವನೆ:

ಮೇಲೆ ಓದಲಾದ ಪತ್ರಗಳಲ್ಲಿ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು 2002 ರಿಂದ ಸರ್ಕಾರದ ಪರವಾಗಿ ಈ ಕೆಳಕಂಡ ಕೋರ್ಸುಗಳ ಸೀಟುಗಳ ಹಂಚಿಕೆ ಮಾಡಲು ಪ್ರವೇಶ ಪರೀಕ್ಷೆ & ಕೌನ್ಸಿಲಿಂಗ್ ನಡೆಸುತ್ತಾ ಬಂದಿರುತ್ತದೆ.

| Courses | Method of Selection |
|---|---|
| B.Sc. Nursing | Merit list based on PUC marks |
| Bachelor of Physiotherapy | Merit list based on PUC marks |
| BPO | Merit list based on PUC marks |
| Master of Physiotherapy | Merit list based on the marks secured in entrance examination |
| Master of Pharmacy | Merit list based on the marks secured in entrance examination |
| Pharm-D (Post Baccalaureate) | Merit list based on the marks secured in entrance examination |
| M.Sc. Nursing | Merit list based on the marks secured in entrance examination |

ಮುಂದುವರೆದು, ಈ ಕೆಳಕಂಡ ಕೋರ್ಸುಗಳಿಗೆ ಯಾವುದೇ ಪ್ರವೇಶ ಪರೀಕ್ಷೆ/ಕೌನ್ಸಿಲಿಂಗ್ ನಡೆಸುವುದಿಲ್ಲವೆಂದು ತಿಳಿಸಿರುತ್ತಾರೆ.

| Courses | Method of Selection |
|---|---|
| B.Sc. Allied Health Sciences | Merit list based on PUC marks |
| PB B.Sc (Nursing) | Merit based on GNM marks |
| M.Sc (AHS) | Based on Marks in Entrance Test |

ವಿಶ್ವವಿದ್ಯಾಲಯವು 2018-19 ನೇ ಸಾಲಿನಿಂದ ಮುಂಬರುವ ಪರೀಕ್ಷೆಗಳು ಹಾಗೂ ಕೌನ್ಸಿಲಿಂಗ್ ಅನ್ನು ನಡೆಸುವ ಪರಿಸ್ಥಿತಿಯಲ್ಲಿ ಇರುವುದಿಲ್ಲವಾದ್ದರಿಂದ ಸದರಿ ಜವಾಬ್ದಾರಿಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸುವಂತೆ ಕೋರಿರುತ್ತಾರೆ.

2) ಕಾರ್ಯಕಾರಿ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 18 ನೇ ಕ್ರಾಸ್, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-560032.
3) ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು-560009.
4) ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ ಟಿ ಬ್ಲಾಕ್, ಜಯನಗರ, ಬೆಂಗಳೂರು-560041.
5) ಸಂಬಂಧಪಟ್ಟ ಎಲ್ಲಾ ಕಾಲೇಜುಗಳಿಗೆ (ವಿಶ್ವವಿದ್ಯಾಲಯದ ಮುಖಾಂತರ)
6) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.
7) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
8) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
9) ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ.

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2018-19ನೇ ಶೈಕ್ಷಣಿಕ ಸಾಲಿನಿಂದ, ಫಾರ್ಮಸಿ ಸ್ನಾತಕೋತ್ತರ ಕೋರ್ಸ್‌ಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಪ್ರವೇಶ ಪರೀಕ್ಷೆಯ ಮೂಲಕ ಆಯ್ಕೆ ಪ್ರಕ್ರಿಯೆ ನಡೆಸುವ ಬಗ್ಗೆ.

**ಓದಲಾಗಿದೆ:**
1. ಕುಲಸಚಿವರು, ರಾ.ಗಾ.ಆ.ವಿ.ವಿಶ್ವವಿದ್ಯಾಲಯ ಇವರ ಪ್ರಸ್ತಾವನೆ ಸಂಖ್ಯೆ:ಆರ್‌ಜಿಯುಹೆಚ್‌ಎಸ್/ಪಿಜಿಇಟಿ/ಯುಜಿ/05/2017-18, ದಿನಾಂಕ: 02.04.2018.
2. ಔಷಧ ನಿಯಂತ್ರಕರು, ರಾಜ್ಯ ಔಷಧ ನಿಯಂತ್ರಣ ಇಲಾಖೆ ಇವರ ವರದಿ ಸಂಖ್ಯೆ:ಔನಿಇ/06/ಯೋಜನೆ/2018-19, ದಿನಾಂಕ: 19.04.2018.

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರ.ಸಂ (1)ರ ಪ್ರಸ್ತಾವನೆಯಲ್ಲಿ, ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರು 2002ನೇ ಸಾಲಿನಿಂದ ಎಂ.ಫಾರ್ಮ ಮತ್ತು ಫಾರ್ಮ.ಡಿ ಕೋರ್ಸ್‌ಗಳಿಗೆ ಸರ್ಕಾರದ ಪರವಾಗಿ ವಿಶ್ವವಿದ್ಯಾಲಯವು ಪ್ರವೇಶ ಪರೀಕ್ಷೆ ಮತ್ತು ಕೌನ್ಸಿಲಿಂಗ್ ಮುಖಾಂತರ ಸೀಟುಗಳನ್ನು ಹಂಚಿಕೆ ಮಾಡುತ್ತಿದ್ದು, ಪ್ರಸ್ತುತ ಈ ಪ್ರಕ್ರಿಯೆಯನ್ನು ನಡೆಸಲು ವಿಶ್ವವಿದ್ಯಾಲಯವು ನಡೆಸುವ ಪರಿಸ್ಥಿತಿಯಲ್ಲಿರುವುದಿಲ್ಲವಾದ್ದರಿಂದ, ಈ ಜವಾಬ್ದಾರಿಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸುವಂತೆ ಸರ್ಕಾರವನ್ನು ಕೋರಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ (2)ರ ವರದಿಯಲ್ಲಿ, ಔಷಧ ನಿಯಂತ್ರಕರು, ರಾಜ್ಯ ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರು ಫಾರ್ಮಸಿ ಸ್ನಾತಕೋತ್ತರ ಕೋರ್ಸ್‌ಗಳಿಗೆ ನಡೆಸುತ್ತಿರುವ ಪ್ರವೇಶ ಪರೀಕ್ಷೆ ಮತ್ತು ಆಯ್ಕೆ ಜವಾಬ್ದಾರಿಯನ್ನು ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದಿಂದ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸುವಂತೆ ಸದರಿ ವಿಶ್ವವಿದ್ಯಾಲಯದ ಕುಲಸಚಿವರು ಕೋರಿದ್ದು, ಅದರಂತೆ, 2018-19ನೇ ಶೈಕ್ಷಣಿಕ ಸಾಲಿನಿಂದ ಎಂ.ಫಾರ್ಮ ಹಾಗೂ ಫಾರ್ಮ.ಡಿ (ಪೋಸ್ಟ್ ಬ್ಯಾಕಲುರೇಟ್) ಕೋರ್ಸ್‌ಗಳನ್ನು ಪ್ರವೇಶ ಪ್ರಕ್ರಿಯೆ ಜವಾಬ್ದಾರಿಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸುವುದು ಸೂಕ್ತವೆಂದು ಅಭಿಪ್ರಾಯ ನೀಡಿರುತ್ತಾರೆ.

ಕುಲಸಚಿವರ ಪ್ರಸ್ತಾವನೆ, ಔಷಧ ನಿಯಂತ್ರಕರ ವರದಿ ಮತ್ತು ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು, ಎಂ.ಫಾರ್ಮ ಹಾಗೂ ಫಾರ್ಮ.ಡಿ (ಪೋಸ್ಟ್ ಬ್ಯಾಕಲುರೇಟ್) ಕೋರ್ಸ್‌ಗಳ ಸರ್ಕಾರಿ ಕೋಟಾ ಸೀಟುಗಳಿಗೆ ಪ್ರವೇಶ ಪರೀಕ್ಷೆ ಮತ್ತು ಕೌನ್ಸಿಲಿಂಗ್ ಮುಖಾಂತರ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವ ಜವಾಬ್ದಾರಿಯನ್ನು ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದಿಂದ 2018-19ನೇ ಶೈಕ್ಷಣಿಕ ಸಾಲಿನಿಂದ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸಲು ನಿರ್ಧರಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಆಕುಕ 72 ಪಿಟಿಡಿ 2018, ಬೆಂಗಳೂರು, ದಿನಾಂಕ:20.04.2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಎಂ.ಫಾರ್ಮ ಹಾಗೂ ಫಾರ್ಮ.ಡಿ (ಪೋಸ್ಟ್ ಬ್ಯಾಕಲುರೇಟ್) ಕೋರ್ಸ್‌ಗಳ ಸರ್ಕಾರಿ ಕೋಟಾ ಸೀಟುಗಳಿಗೆ ಪ್ರವೇಶ ಪರೀಕ್ಷೆ ಮತ್ತು ಕೌನ್ಸಿಲಿಂಗ್ ಮುಖಾಂತರ [illegible] ಆಯ್ಕೆ ಮಾಡುವ ಜವಾಬ್ದಾರಿಯನ್ನು

ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದಿಂದ 2018-19ನೇ ಶೈಕ್ಷಣಿಕ ಸಾಲಿನಿಂದ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸಿ ಆದೇಶಿಸಿದೆ.

| ಕೋರ್ಸ್‌ಗಳು | ಆಯ್ಕೆಯ ವಿಧಾನ |
|---|---|
| ಮಾಸ್ಟರ್ ಆಫ್ ಫಾರ್ಮಸಿ | ಪ್ರವೇಶ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಜ್ಯೇಷ್ಠತೆಯ ಮೇರೆಗೆ. |
| ಫಾರ್ಮ.ಡಿ (ಪೋಸ್ಟ್ ಬ್ಯಾಕಲುರೇಟ್) | ಪ್ರವೇಶ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಜ್ಯೇಷ್ಠತೆಯ ಮೇರೆಗೆ. |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ.

(ಬಿ.ಕಮಲಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾರತೀಯ ವೈದ್ಯ ಪದ್ಧತಿ)
(ದೂರವಾಣಿ ಸಂಖ್ಯೆ:22034292)

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು-ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ 25 ಪ್ರತಿಗಳನ್ನು ಇಲಾಖೆಗೆ ಒದಗಿಸಲು ಕೋರಿದೆ.

**ಪ್ರತಿಗಳು:-**

1. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 18ನೇ ಕ್ರಾಸ್, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-32.
2. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು-09.
3. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ ಟಿ.ಬ್ಲಾಕ್, ಜಯನಗರ, ಬೆಂಗಳೂರು-41.
4. ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
5. ಪ್ರಾಂಶುಪಾಲರು, ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ, ಸುಬ್ಬಯ್ಯ ಸರ್ಕಲ್, ಪಿ.ಕಾಳಿಂಗರಾವ್ ರಸ್ತೆ, ಬೆಂಗಳೂರು-560 027.
6. ಸಂಬಂಧಪಟ್ಟ ಎಲ್ಲಾ ಕಾಲೇಜುಗಳಿಗೆ (ಕುಲಸಚಿವರು, ರಾ.ಆ.ವಿ.ವಿಶ್ವವಿದ್ಯಾಲಯ ಇವರ ಮುಖಾಂತರ).
7. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ [illegible] ಆಪ್ತ ಸಹಾಯಕರಿಗೆ.